# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1251
ಮಾನ್ಯ ಸದಸ್ಯರ ಹೆಸರು : ಶ್ರೀ ಎಸ್.ರವಿ
ಉತ್ತರಿಸುವ ದಿನಾಂಕ : 22-08-2025
ಉತ್ತರಿಸುವ ಸಚಿವರು : ಮಾನ್ಯ ಸಮಾಜ ಕಲ್ಯಾಣ ಸಚಿವರು

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಸಮಾಜ ಕಲ್ಯಾಣ ಇಲಾಖೆಯಡಿ ಕಾರ್ಯನಿರ್ವಹಿಸುತ್ತಿರುವ ವಸತಿ ಶಾಲೆಗಳು ಯಾವುವು ಈ ವಸತಿ ಶಾಲೆಗಳಿಗೆ ಮಂಜೂರಾಗಿರುವ ಶಿಕ್ಷಕರ ಹುದ್ದೆಗಳು ಎಷ್ಟು; ನೇಮಕಾತಿ ಮೂಲಕ ತುಂಬಿರುವ ಹುದ್ದೆಗಳು ಎಷ್ಟು; ಹೊರಗುತ್ತಿಗೆ ಮೂಲಕ ತುಂಬಿರುವ ಹುದ್ದೆಗಳು ಎಷ್ಟು; (ಜಿಲ್ಲಾವಾರು ಮತ್ತು ಶಾಲೆವಾರು ಮಾಹಿತಿ ನೀಡುವುದು) | ಸಮಾಜ ಕಲ್ಯಾಣ ಇಲಾಖೆಯ ವತಿಯಿಂದ 68 ಡಾ.ಬಿ.ಆರ್.ಅಂಬೇಡ್ಕರ್ ಸರ್ಕಾರಿ ವಸತಿ ಶಾಲೆಗಳ ಪೈಕಿ 58 ವಸತಿ ಶಾಲೆಗಳು ಕಾರ್ಯ ನಿರ್ವಹಿಸಲಾಗುತ್ತಿದೆ. ಜಿಲ್ಲಾವಾರು ಮತ್ತು ಶಾಲೆವಾರು ವಿವರವನ್ನು ಅನುಬಂಧ-1ರಲ್ಲಿ ನೀಡಲಾಗಿದೆ.<br><br>ಸಮಾಜ ಕಲ್ಯಾಣ ಇಲಾಖಾ ವ್ಯಾಪ್ತಿಯಲ್ಲಿನ ವಸತಿ ಶಾಲೆಗಳಿಗೆ ಮಂಜೂರಾಗಿರುವ ವಸತಿ ಶಾಲಾ ಶಿಕ್ಷಕರ ಹುದ್ದೆಗಳು: 340<br><br>ಭರ್ತಿಯಾಗಿರುವ ಹುದ್ದೆಗಳು: 133<br><br>ಒಟ್ಟು 157 ಹುದ್ದೆಗಳು ಖಾಲಿ ಇದ್ದು, ಖಾಲಿ ಇರುವ ಹುದ್ದೆಗಳಿಗೆ ಎದುರಾಗಿ 157 ಹುದ್ದೆಗಳಿಗೆ ಗೌರವಧನದ ಆಧಾರದ ಮೇಲೆ ಬೋಧಕ ಸಿಬ್ಬಂದಿ ಸೇವೆಯನ್ನು ಪಡೆಯಲಾಗಿದೆ. ಜಿಲ್ಲಾವಾರು ಮತ್ತು ಶಾಲೆವಾರು ಮಾಹಿತಿಯನ್ನು ಅನುಬಂಧ-2ರಲ್ಲಿ ನೀಡಿದೆ. |
| ಆ) | ಸಮಾಜ ಕಲ್ಯಾಣ ಇಲಾಖೆಯಡಿ ಕಾರ್ಯನಿರ್ವಹಿಸುತ್ತಿರುವ ವಸತಿ ಶಾಲೆಗಳಲ್ಲಿ ಶಿಕ್ಷಕರ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ವಸತಿ ಶಾಲೆಗಳಲ್ಲಿ ಕೊರತೆ ಇರುವ ಶಿಕ್ಷಕರನ್ನು ನೇಮಕ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು? (ವಿವರ ನೀಡುವುದು) | ಗ್ರೂಪ್-ಸಿ ವೃಂದದ ನೇರ ನೇಮಕಾತಿ ಕೋಟದಡಿ ಖಾಲಿ ಇರುವ 142 ಹುದ್ದೆಗಳು ಭರ್ತಿ ಪೂರ್ವದಲ್ಲಿ ಆರ್ಥಿಕ ಇಲಾಖೆಯ ಸಹಮತಿಗಾಗಿ ಕೋರಲಾಗಿದ್ದು ಪರಿಶೀಲನಾ ಹಂತದಲ್ಲಿರುತ್ತದೆ.<br><br>ಮುಂದುವರೆದು ಇಲಾಖೆಯ ವಸತಿ ಶಾಲೆಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ ಗೌರವಧನದ ಆಧಾರದ ಮೇಲೆ ಬೋಧಕ ಸಿಬ್ಬಂದಿಗಳ ಸೇವೆಯನ್ನು ಪಡೆದು ವಸತಿ ಶಾಲೆಗಳನ್ನು ನಿರ್ವಹಿಸಲಾಗುತ್ತಿದೆ. |

ಸಕಇ 716 ಪಕವಿ 2025

(ಡಾ: ಹೆಚ್.ಸಿ.ಮಹದೇವಪ್ಪ)
ಸಮಾಜ ಕಲ್ಯಾಣ ಸಚಿವರು